1	2	3
12	ಬಾಣಸಿಗ, ವ್ಯಾನ್ ಷರಾಪ್ ದರ್ಜೆ–2 ಮತ್ತು ದರ್ಜೆ \–3 ಡೇರಿ	136
	ತಾಂರಿಕರು ದರ್ಜೆ–1, ದರ್ಜೆ–2, ದರ್ಜೆ–3 ಮತ್ತು ದರ್ಜೆ–3 ಡೇರಿ	
	ನಿರ್ವಹಣೆಕಾರರು ದರ್ಜೆ 1 ದರ್ಜೆ–2, ದರ್ಜೆ–3 ಮತ್ತು ದರ್ಜೆ–4	
13	ಡೇರಿ ಕಾರ್ಯಕರ್ತರು ದರ್ಜೆ–1, ದರ್ಜೆ–2, ದರ್ಜೆ–3 ಮತ್ತು	
	ದರ್ಜೆ–4 ಮತ್ತು ಸಹಾಯಕರು	67
	ಒಟ್ಟು	**385**

ಧಾರವಾಡದಲ್ಲಿ ವಸತಿ ಮತ್ತು ಪ್ರಸಾರ ನಿಲಯಗಳನ್ನು ಹೆಚ್ಚಿಸುವುದು

3063 (3794) : ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) : ಮಾನ್ಯ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯ ಉತ್ತರ ಕರ್ನಾಟಕದ ಶೈಕ್ಷಣಿಕ ಕೇಂದ್ರವಾಗಿರುವುದನ್ನು ಸರ್ಕಾರ ಗಮನಿಸಿದೆಯೇ?

ಆ) ಅಲ್ಪಸಂಖ್ಯಾತರ ವಸತಿ ಮತ್ತು ಪ್ರಸಾರ ನಿಲಯಗಳು, ಪ್ರೌಢಶಾಲೆಗಳು, ವಿಶ್ವ ವಿದ್ಯಾನಿಲಯಗಳು (ಪುರುಷ ಹಾಗೂ ಮಹಿಳೆಯರ) ಈ ವ್ಯಾಪ್ತಿಯಲ್ಲಿ ಎಷ್ಟಿದೆ: (ಸಂಖ್ಯೆವಾರು ಮಾಹಿತಿ ನೀಡುವುದು)

ಇ) ಪ್ರತಿ ಪ್ರಸಾದ ನಿಲಯದಲ್ಲಿರುವ ಪುರುಷರ ಮತ್ತು ಮಹಿಳಾ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು:

ಈ) ವಸತಿ ಮತ್ತು ಪ್ರಸಾರ ನಿಲಯಗಳನ್ನು ಹೆಚ್ಚಿಸುವ ಬಗ್ಗೆ ಸರ್ಕಾರ ಕ್ರಮ ಕೈ ಗೊಂಡಿದೆಯೆ?

ಶ್ರೀ ಎಂ.ಎಲ್. ಉಸ್ತಾದ್ (ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ರಾಜ್ಯ ಸಚಿವರು): ಅ) ಹೌದು ಗಮನಿಸಿದೆ.

ಆ) ಅಲ್ಪಸಂಖ್ಯಾತರ ಇಲಾಖಾವತಿಯಿಂದ ಧಾರವಾಡ ಜಿಲ್ಲೆಯಲ್ಲಿ ಮೆಟ್ರಿಕ್–ನಂತರದ ಒಂದು ಬಾಲಕಿಯರ ವಿದ್ಯಾರ್ಥಿನಿಲಯ ಹಾಗೂ ಒಂದು ಮಾರ್ಚ್ ದೇಸಾಯಿ ವಸತಿ ಶಾಲೆ ನಡೆಸಲಾಗುತ್ತಿದೆ ಹಾಗೂ 9 ಉರ್ದು ಸರ್ಕಾರಿ ಪ್ರೌಢಶಾಲೆಗಳು, 4 ಅನುದಾನಿತ ಪ್ರೌಢಶಾಲೆಗಳು ಮತ್ತು 3 ಅನುದಾನ ರಹಿತ ಪ್ರೌಢಶಾಲೆಗಳಿವೆ.

ಇ) ಈ ಅಲ್ಪಸಂಖ್ಯಾತರ ಇಲಾಖಾ ವತಿಯಿಂದ ನಡೆಸುತ್ತಿರುವ ಮೆಟ್ರಿಕ್–ನಂತರದ ಬಾಲಕೀಯರ ವಿದ್ಯಾರ್ಥಿನಿಲಯದಲ್ಲಿ 50 ವಿದ್ಯಾರ್ಥಿನಿಯರು ಮತ್ತು ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ 77 ಬಾಲಕರು ಮತ್ತು 15 ಬಾಲಕಿಯರಿಗೆ ವಸತಿ ಮತ್ತು ಇತರೆ ಸೌಲಭ್ಯಗಳನ್ನು ಒದಗಿಸಲಾಗಿದೆ.

ಈ) ಆಯವ್ಯಯದ ಲಭ್ಯತೆಗೆ ಅನುಗುಣವಾಗಿ ಹಾಗು ಬೇಡಿಕೆಗೆ ಅನುಗುಣವಾಗಿ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಕ್ರಮವಹಿಸಲಾಗುವುದು.

ರಾಜ್ಯದಲ್ಲಿ ಹೊಸ ಪಶು ವೈದ್ಯಕೀಯ ಮಹಾ ವಿದ್ಯಾಲಯಗಳನ್ನು ತೆರೆಯುವುದು

3064 (3795) : ಶ್ರೀ ಬೆಲ್ಲದ್ ಚಂದ್ರಕಾಂತ್ ಗುರಪ್ಪ (ಧಾರವಾಡ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಪಶು ವೈದ್ಯಕೀಯ ಮಹಾ ವಿದ್ಯಾಲಯಗಳ ಸಂಖ್ಯೆ ಎಷ್ಟು (ವಿವರ ನೀಡುವುದು);

ಆ) ಪಶುವೈದ್ಯಕೀಯ ಮಹಾವಿದ್ಯಾಲಯಗಳನ್ನು ಹೆಚ್ಚಿಸುವ ಯೋಜನೆ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ ಪ್ರತಿ ಕೃಷಿ ಸಂಶೋದನಾ ಕೇಂದ್ರಗಳು ಇರುವ ಪ್ರದೇಶಗಳಲ್ಲಿ ವಿಶ್ವವಿದ್ಯಾಲಯಗಳನ್ನು ಪ್ರಾರಂಭಿಸಲು ಸರ್ಕಾರ ಆದ್ಯತೆ ನೀಡಲಿದೆಯೇ;

ಇ) ಎಷ್ಟು ವಿದ್ಯಾಲಯಗಳನ್ನು ಯಾವ ಸ್ಥಳದಲ್ಲಿ ತೆರೆಯಲಾಗುವುದು? (ವಿವರ ನೀಡುವುದು)

ಶ್ರೀ ವಿ.ಎಸ್. ಕೌಜಲಗಿ (ಕೃಷಿ ಸಚಿವರು):

ಅ) 2

1. ಪಶುವೈದ್ಯಕೀಯ ಮಹಾ ವಿದ್ಯಾಲಯ ಹೆಬ್ಬಾಳ, ಬೆಂಗಳೂರು ಮತ್ತು
2. ಪಶುವೈದ್ಯಕೀಯ ಮಹಾ ವಿದ್ಯಾಲಯ ಬೀದರ್‌ನಲ್ಲಿ ಇದೆ.

ಆ) ಇಲ್ಲ

ಇ) ಉದ್ಭವಿಸುವುದಿಲ್ಲ.

ಬಸವನ ಬಾಗೇವಾಡಿ ಕ್ಷೇತ್ರದಲ್ಲಿ ವಸತಿ ನಿಲಯಗಳನ್ನು ಮಂಜೂರು ಮಾಡುವುದು

3065 (3865) : ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವನಬಾಗೇವಾಡಿ ಮತಕ್ಷೇತ್ರಕ್ಕೆ ಬರುವ ಕೋಲಹಾರ, ಮಲಘಾಣ, ಬಸನಾಳ ಗ್ರಾಮಗಳಿಗೆ ಬಿ.ಸಿ.ಎಂ. ಹಾಗೂ ಎಸ್‌ಸಿಎಸ್‌ಟಿ ವಸತಿ ನಿಲಯಗಳನ್ನು ಮಂಜೂರು ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೆ;

ಆ) ಯಾವಾಗ ಮಂಜೂರು ಮಾಡಲಾಗುವುದು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ)ಮತ್ತು ಆ) 2003–04ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಉತ್ತರ ಕರ್ನಾಟಕದ ಹಿಂದುಳಿದ 7 ಜಿಲ್ಲೆಗಳಲ್ಲಿ 75 ಹೊಸ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭ ಮಾಡುವ ಬಗ್ಗೆ ಮಾನ್ಯ ಮುಖ್ಯ ಮಂತ್ರಿಗಳು ಘೋಷಿಸಿರುತ್ತಾರೆ, ಯಾವ ಸ್ಥಳಗಳಲ್ಲಿ ಮಂಜೂರಾತಿ ಮಾಡಬೇಕೆಂಬುದು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

ಬಸವನ ಬಾಗೇವಾಡಿ ತಾಲ್ಲೂಕಿನಲ್ಲಿ ಪಶು ಆಸ್ಪತ್ರೆಗಳನ್ನು ಮಂಜೂರು ಮಾಡುವುದು

3066 (3866) : ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನಬಾಗೇವಾಡಿ) : ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವನಬಾಗೆವಾಡಿ ತಾಲ್ಲೂಕಿನ ರೋಣಹಾಳ, ಮಸೀಬನಾಳ, ಹಣಮಾಪೂರ, ಗ್ರಾಮಗಳಿಗೆ ಪಶುಆಸ್ಪತ್ರೆಗಳನ್ನು ಮಂಜೂರು ಮಾಡಬೇಕಾದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ಆಸ್ಪತ್ರೆಗಳನ್ನು ಮಂಜೂರು ಮಾಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?